# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 966 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21-09-2022. |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಮ ಸಂ: | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಂಗಳೂರು-ಮೈಸೂರು ದಶಪಥ ರಾಷ್ಟ್ರೀಯ ಹೆದ್ದಾರಿ ಕುರಿತು ಸಾರ್ವಜನಿಕರಿಂದ ಮತ್ತು ಮಾಧ್ಯಮಗಳಲ್ಲಿ ಕಳಪೆ ಕಾಮಗಾರಿಯ ಆರೋಪ ಕೇಳ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು - ಮೈಸೂರು (ರಾ.ಹೆ.275) ದಶಪಥ ರಸ್ತೆಯು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಇವರ ಸುಪರ್ದಿಯಲ್ಲಿರುತ್ತದೆ. ಸದರಿ ಹೆದ್ದಾರಿಯ ಕುರಿತು ಈ ಕೆಳಕಂಡಂತೆ ವರದಿಸಿರುತ್ತಾರೆ.<br>ಸದರಿ ಕಾಮಗಾರಿಯ ಗುಣಮಟ್ಟದ ಕುರಿತು ಮೇಲ್ವಿಚಾರಣೆಯನ್ನು 3rd Party consultants ಕೈಗೊಳ್ಳಲಾಗುತ್ತಿದೆ. ಅಲ್ಲದೆ, IRC ನಿಯಮಗಳಂತೆ, frequency test ಗಳನ್ನು ಕೈಗೊಳ್ಳಲಾಗುತ್ತಿದ್ದು, ಗುಣ ನಿಯಂತ್ರಣ ಪ್ರಯೋಗಾಲಯವನ್ನು ಸ್ಥಾಪಿಸಲಾಗಿದೆ.<br>ಮುಂದುವರೆದು, ಕಾಮಗಾರಿ ಗುಣಮಟ್ಟದ ಕುರಿತು Non-destructive ಹಾಗೂ Trial Board ವಿಧಾನದಲ್ಲಿ ಮರುಪರಿಶೀಲನೆಯನ್ನು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕೇಂದ್ರ ಕಛೇರಿಯಿಂದ ನೇಮಕಗೊಂಡ ಬೇರೆ ರಾಜ್ಯದ ನಿವೃತ್ತಿ ಹೊಂದಿರುವ Engineer-in-chief ಗಳು/ ವಿಶೇಷ ಕಾರ್ಯದರ್ಶಿಗಳ ಮಟ್ಟದ ಅಧಿಕಾರಿಗಳಿಂದ ನಡೆಸಲಾಗಿದೆ. |
| ಆ) | ಬಂದಿದ್ದಲ್ಲಿ, ಬೆಂಗಳೂರು-ಮೈಸೂರು ನಡುವಿನ ಯಾವ ಯಾವ ಸ್ಥಳದಲ್ಲಿ ಇಂತಹ ಕಳಪೆ ಕಾಮಗಾರಿ ನಡೆದಿದೆ; (ಮಾಹಿತಿ ನೀಡುವುದು) | ಸದರಿ ಕಾಮಗಾರಿಯನ್ನು ರಿಯಾಯಿತಿ ಕರಾರಿನಂತೆ, IRC ನಿಯಮಗಳಂತೆ, ಕೇಂದ್ರ ಭೂಸಾರಿಗೆ ಮಂತ್ರಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಮಾರ್ಗಸೂಚಿಗಳಂತೆ ನಡೆಸಲಾಗುತ್ತಿದ್ದು, ಗುಣಮಟ್ಟವನ್ನು ಕಾಯ್ದುಕೊಳ್ಳಲಾಗುತ್ತಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಇ) | ಈ ಅವೈಜ್ಞಾನಿಕ ಕಾಮಗಾರಿಯಿಂದ ಆ ಭಾಗದ ಸಾರ್ವಜನಿಕರಿಗೆ ನೆರೆ ಹಾವಳಿಯ ಪರಿಸ್ಥಿತಿ ಎದುರಾಗಿರುವ ಬಗ್ಗೆ ಹಾಗೂ ಇನ್ನಿತರೆ ಕಳಪೆ ಕಾಮಗಾರಿಗಳ ಬಗ್ಗೆ ಕಾವೇರಿ ನೀರಾವರಿ ನಿಗಮದಿಂದ ಹಲವು ಪತ್ರಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಪತ್ರ ಬರೆದು ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಾಲುವೆಗಳು ಹಾದು ಹೋಗುವ ಭಾಗದಲ್ಲಿ ರಕ್ಷಣಾ ಕಾಮಗಾರಿಗಳು ಅಂದರೆ ಲೈನಿಂಗ್, ತಡೆಗೋಡೆಗಳನ್ನು ನಿರ್ಮಿಸುವಂತೆ ಕಾವೇರಿ ನೀರಾವರಿ ನಿಗಮವು ಕೋರಿದ್ದು, ಯೋಜನೆಯು ಪೂರ್ಣಗೊಳಿಸುವ ಮುನ್ನ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಈ) | ಬಂದಿದ್ದಲ್ಲಿ, ಈ ಬಗ್ಗೆ ಸದರಿ ಪ್ರಾಧಿಕಾರದವರು ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | |

| | | |
|---|---|---|
| ಉ) | ಬೆಂಗಳೂರು-ಮೈಸೂರು ದಶಪಥ ರಾಷ್ಟ್ರೀಯ ಹೆದ್ದಾರಿಯ ಅವೈಜ್ಞಾನಿಕ ಮತ್ತು ಕಳಪೆ ಕಾಮಗಾರಿಗಳನ್ನು ಸರಿಪಡಿಸಿ, ಯಾವಾಗ ಸಾರ್ವಜನಿಕರ ಸೇವೆಗೆ ಅರ್ಪಿಸಲಾಗುವುದು? (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು) | ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದ್ದು, ಶೆ.93% ಭೌತಿಕ ಪ್ರಗತಿ ಹಾಗೂ ರೂ.1041.27 ಕೋಟಿ ಆರ್ಥಿಕ ಪ್ರಗತಿ ಸಾಧಿಸಲಾಗಿರುತ್ತದೆ. ರಿಯಾಯಿತಿ ಕರಾರಿನಂತೆ ಕಾಮಗಾರಿಯನ್ನು ದಿನಾಂಕ: 07.06.2022 ರೊಳಗೆ ಪೂರ್ಣಗೊಳಸಬೇಕಾಗಿರುತ್ತದೆ. ಆದರೆ, ಕೋವಿಡ್ ಕಾರಣದಿಂದಾಗಿ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಸಲಾಗದ ಕಾರಣ ಹೆಚ್ಚುವರಿಯಾಗಿ 6 ತಿಂಗಳ ಕಾಲವಕಾಶಕ್ಕೆ ಅನುಮೋದನೆ ನೀಡಲಾಗಿರುತ್ತದೆ. ಅದರಂತೆ, ದಿನಾಂಕ:30.12.2022 ರೊಳಗೆ ಕಾಮಗಾರಿಯನ್ನು ಪುರ್ಣಗೊಳಸಲು ಕ್ರಮ ಕೈಗೊಳ್ಳಲಾಗುವುದೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 328 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು